35	Yagavakote	5 00
36	Yemigadele	4 50
	ಒಟ್ಟು	**151 15**

556(560) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಮತಕ್ಷೇತದ ಮಲಪ್ರಭಾ ಅಚ್ಚುಕಟ್ಟು ಪ್ರದೇಶದಲ್ಲಿ ನೀರಾವರಿ ಇಲಾಖೆಯ ರಸ್ತೆಗಳ ಸುಧಾರಣೆಗೆ ಕೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಯಾವಾಗ ಹಣ ಮಂಜೂರು ಮಾಡಲಾಗುವುದು?

ಶ್ರೀ ಕೆ ಎಸ್ ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು)

ಅ) ಬಂದಿದೆ

ಆ) ಈ ರಸ್ತೆ ಸುಧಾರಣೆ ಕಾಮಗಾರಿಗಳಿಗೆ ರೂ 48 00 ಲಕ್ಷಗಳ ಅವಶ್ಯಕತೆ ಇದ್ದು, ಅನುದಾನದ ಲಭ್ಯತೆಯನ್ನು ಆಧರಿಸಿ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು

557(551) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕಿತ್ತೂರು ಮತಕ್ಷೇತ್ರದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು?

ಆ) ಇವುಗಳಿಗೆ ಕುಡಿಯುವ ನೀರಿನ ಹಾಗೂ ಶೌಚಾಲಯಗಳ ವ್ಯವಸ್ಥೆಯನ್ನು ಒದಗಿಸಿ ಕೊಡಲಾಗಿದೆಯೆ?

ಇ) ಎಷ್ಟು ಶಾಲೆಗಳು ಈ ಸೌಲಭ್ಯದಿಂದ ವಂಚಿತವಾಗಿವೆ?

ಈ) ಅತ್ಯಗತ್ಯವಾಗಿರುವ ಈ ಸೌಲಭ್ಯವನ್ನು ಪೂರ್ಣ ಪ್ರಾಮಾಣದಲ್ಲಿ ಒದಗಿಸಿಕೊಡುವ ಬಗ್ಗೆ ಸರ್ಕಾರದ ಕ್ರಮಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕಿತ್ತೂರು ಮತಕ್ಷೇತ್ರದಲ್ಲಿ 148 ಸರ್ಕಾರಿ ಪ್ರಾಥಮಿಕ ಮತ್ತು 15 ಸರ್ಕಾರಿ ಪ್ರೌಢಶಾಲೆಗಳಿವೆ